**ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿಯವರ ಕಾರ್ಯಾಲಯ,**
**ದಕ್ಷಿಣ ಕನ್ನಡ ಜಿಲ್ಲೆ,**
**ಮಂಗಳೂರು – 575 001.**

ಕರ್ನಾಟಕ ಸರಕಾರ
GOVERNMENT OF KARNATAKA
( ಕಂದಾಯ ಇಲಾಖೆ )

**Deputy Commissioner &**
**District Magistrate's Office,**
**Dakshina Kannada District,**
**Mangaluru – 575 001.**

---

ನಂ. ಎಂಎಜಿ(2)ಸಿಆರ್ 156/2021/133465/ಸಿ4/62 ದಿನಾಂಕ: 05-01-2022

## ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಹಾಗೂ ಅಧ್ಯಕ್ಷರು, ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು ಇವರ ನಡವಳಿ

ವಿಷಯ : ಕೋವಿಡ್-19 ಹೆಚ್ಚುವರಿ ನಿಯಂತ್ರಣ ಕ್ರಮಗಳನ್ನು ಜ್ಯಾರಿಗೊಳಿಸುವ ಕುರಿತು.

ಉಲ್ಲೇಖ : 1) ಈ ಕಛೇರಿ ಆದೇಶ ಸಂಖ್ಯೆ: ಎಂಎಜಿ(2)ಸಿಆರ್ 156/2021/133465/ಸಿ4/59 ; ದಿನಾಂಕ: 22-12-2021.

2) ಈ ಕಛೇರಿ ಆದೇಶ ಸಂಖ್ಯೆ: ಎಂಎಜಿ(2)ಸಿಆರ್ 156/2021/133465/ಸಿ4/60 ; ದಿನಾಂಕ: 27-12-2021.

3) ಸರಕಾರದ ಆದೇಶ ಸಂಖ್ಯೆ: ಆರ್‌ಡಿ158 ಟಿಎನ್‌ಆರ್ 2020 ; ದಿನಾಂಕ: 04-01-2022.

=======@=======

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕೋವಿಡ್-19 ನಿಯಂತ್ರಣಕ್ಕೆ ಸಂಬಂಧಿಸಿದಂತೆ ಜಿಲ್ಲಾಡಳಿತವು ಸರ್ಕಾರದ ನಿರ್ದೇಶನದಂತೆ ಕೋವಿಡ್-19 ಕಣ್ಗಾವಲು, ನಿಯಂತ್ರಣ ಮತ್ತು ಜಾಗರೂಕತೆ ಮಾರ್ಗಸೂಚಿಗಳನ್ನು ಜ್ಯಾರಿಗೊಳಿಸಿದ್ದು, ಸದ್ರಿ ಮಾರ್ಗಸೂಚಿಗಳನ್ನು ಮುಂದಕ್ಕೆ ವಿಸ್ತರಿಸಿ ಮಾರ್ಪಾಡುಗೊಳಿಸಿ ಈಗಾಗಲೇ ಉಲ್ಲೇಖ (2) ರಂತೆ ಆದೇಶಿಸಲಾಗಿರುತ್ತದೆ.

ರಾಜ್ಯದಲ್ಲಿ "ಓಮಿಕ್ರಾನ್" ನ ರೂಪಾಂತರದ ಹರಡುವಿಕೆಯಿಂದ, ರಾಜ್ಯ ಸರ್ಕಾರವು ಪೂರ್ವಭಾವಿಯಾಗಿ ಹೆಚ್ಚುವರಿ ಕ್ರಮಗಳನ್ನು ದಿನಾಂಕ : 03-12-2021 ಮತ್ತು 26-12-2021 ರ ಆದೇಶಗಳಂತೆ ಜ್ಯಾರಿಗೊಳಿಸಿರುತ್ತದೆ. ರಾಜ್ಯದಲ್ಲಿ ಕೋವಿಡ್-19 ನ ರೂಪಾಂತರಗೊಂಡ ಓಮಿಕ್ರಾನ್ - 'ಕಾಳಜಿಯ ರೂಪಾಂತರ' ವೈರಾಣು ಸೋಂಕಿತರ ಸಂಖ್ಯೆಯು ಆತಂಕಕಾರಿಯಾಗಿ ಹೆಚ್ಚಳಗೊಂಡಿರುವುದು ಕಂಡುಬಂದಿದ್ದು 3 ದಿನಗಳಿಗಿಂತ ಕಡಿಮೆ ಅವಧಿಯಲ್ಲಿ ರೋಗಿಗಳ ಸಂಖ್ಯೆಯು ದ್ವಿಗುಣಗೊಂಡಿರುತ್ತದೆ.

ಈ ಹಿನ್ನೆಲೆಯಲ್ಲಿ, ರಾಜ್ಯ ತಾಂತ್ರಿಕ ಸಲಹಾ ಸಮಿತಿಯು ಕೋವಿಡ್-19 ನಿಂದಾಗಿ ಸೋಂಕಿನ ಹರಡುವಿಕೆಯನ್ನು ತಡೆಗಟ್ಟಲು ಹೆಚ್ಚುವರಿ ನಿಯಂತ್ರಣ ಕ್ರಮಗಳನ್ನು ವಿಧಿಸಲು ಸಲಹೆ ನೀಡಿದ್ದು, ಪ್ರಸ್ತುತ ಪರಿಸ್ಥಿತಿಯಲ್ಲಿ ಪರೀಕ್ಷೆ-ಪತ್ತೆ-ಚಿಕಿತ್ಸೆ-ಲಸಿಕಾಕರಣ ಮತ್ತು ಕೋವಿಡ್-19 ಸಮುಚಿತ ವರ್ತನೆಗಳನ್ನು ಕಟ್ಟುನಿಟ್ಟಾಗಿ ಅನುಸರಿಸುವುದು ಮೊದಲಾದ ಐದು ತಂತ್ರಗಳ ಮೇಲೆ ನಿರಂತರವಾಗಿ ಗಮನಹರಿಸುವ ಅಗತ್ಯವಿರುವುದರಿಂದ ಸರ್ಕಾರವು ಕೋವಿಡ್-19 ಕಣ್ಗಾವಲು, ನಿಯಂತ್ರಣ ಮತ್ತು ಜಾಗೃತಿಗೆ ಸಂಬಂಧಿಸಿ ದಿನಾಂಕ: 03-12-2021 ಮತ್ತು 26-12-2021 ರ ಆದೇಶಗಳೊಂದಿಗೆ ಹೆಚ್ಚುವರಿ ಮಾರ್ಗಸೂಚಿಗಳನ್ನು ದಿನಾಂಕ: 05-01-2022 ರ ರಾತ್ರಿ ಗಂಟೆ 10-00 ರಿಂದ ದಿನಾಂಕ: 19-01-2022 ರ ಬೆಳಿಗ್ಗೆ ಗಂಟೆ 05-00 ರವರೆಗೆ ಸರ್ಕಾರವು ಉಲ್ಲೇಖ (3) ರಂತೆ ಜ್ಯಾರಿಗೊಳಿಸಿ ಆದೇಶಿಸಿರುತ್ತದೆ.

ಸರ್ಕಾರದ ಉಲ್ಲೇಖ (3) ರ ಆದೇಶ ಮತ್ತು ಜಿಲ್ಲೆಯ ಪ್ರಸಕ್ತ ವಿದ್ಯಮಾನಗಳನ್ನು ಅವಲೋಕಿಸಿ SARS-CoV-2 ರೂಪಾಂತರಿ B.1.1.529 (ಓಮಿಕ್ರಾನ್) ವೈರಾಣುವನ್ನು 'ಕಾಳಜಿಯ ರೂಪಾಂತರ' (Variant of Concern-VoC) ಪ್ರಸರಣವನ್ನು

Website: www.dk.nic.in Phone: 0824-2220588 Fax: 0824-2441564 Email:dc.mnglr@gmail.com

ಪರಿಣಾಮಕಾರಿಯಾಗಿ ನಿಯಂತ್ರಿಸುವ ನಿಟ್ಟಿನಲ್ಲಿ ಸಾರ್ವಜನಿಕ ಹಿತದೃಷ್ಟಿಯಿಂದ **ಡಾ|| ರಾಜೇಂದ್ರ ಕೆ.ವಿ.,** ಭಾ.ಆ.ಸೇ, **ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಹಾಗೂ ಅಧ್ಯಕ್ಷರು, ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು** ಆದ ನಾನು ವಿಪತ್ತು ನಿರ್ವಹಣಾ ಕಾಯ್ದೆ 2005 ರ ಕಲಂ 34 ಹಾಗೂ ದಂಡ ಪ್ರಕ್ರಿಯಾ ಸಂಹಿತೆ 1973 ರ ಕಲಂ 144 (3) ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ದಿನಾಂಕ: 03-12-2021 ಮತ್ತು 26-12-2021 ರ ಆದೇಶಗಳೊಂದಿಗೆ ಈ ಕೆಳಕಂಡ ಹೆಚ್ಚುವರಿ ನಿಯಂತ್ರಣ ಕ್ರಮಗಳನ್ನು **ದಿನಾಂಕ: 05-01-2022 ರ ರಾತ್ರಿ ಗಂಟೆ 10-00 ರಿಂದ ದಿನಾಂಕ: 19-01-2022 ರ ಬೆಳಿಗ್ಗೆ ಗಂಟೆ 05-00 ರವರೆಗೆ** ಅನ್ವಯವಾಗುವಂತೆ ವಿಧಿಸಿ ಆದೇಶಿಸಿರುತ್ತೇನೆ. ಹಾಗೂ ದಕ್ಷಿಣ ಕನ್ನಡ ಜಿಲ್ಲೆಗೆ ಪ್ರವೇಶ ಕಲ್ಪಿಸುವ ಗಡಿಭಾಗಗಳಲ್ಲಿ ಈಗಾಗಲೇ ನಿರ್ಮಿಸಲಾಗಿರುವ ಚೆಕ್ ಪೋಸ್ಟ್ ಗಳಲ್ಲಿ ತಪಾಸಣೆ ಕಾರ್ಯವನ್ನು ಕಟ್ಟುನಿಟ್ಟಾಗಿ ತೀವ್ರವಾಗಿನಡೆಸುವಂತೆ ಆದೇಶಿಸಿರುತ್ತೇನೆ.

## ಹೆಚ್ಚುವರಿ ನಿಯಂತ್ರಣ ಕ್ರಮಗಳು:

1. ಜಿಲ್ಲೆಯಾದ್ಯಂತ ರಾತ್ರಿ ಗಂಟೆ **10-00** ರಿಂದ ಬೆಳಿಗ್ಗೆ ಗಂಟೆ **5-00** ರವರೆಗೆ **ರಾತ್ರಿ ಕರ್ಫ್ಯೂ** ಜಾರಿಯಲ್ಲಿರುತ್ತದೆ.
2. ಜಿಲ್ಲೆಯಾದ್ಯಂತ **ವಾರಾಂತ್ಯದ ಕರ್ಫ್ಯೂ ಶುಕ್ರವಾರ ರಾತ್ರಿ ಗಂಟೆ 10-00 ರಿಂದ ಸೋಮವಾರ ಬೆಳಿಗ್ಗೆ ಗಂಟೆ 5-00 ರವರೆಗೆ** ಜ್ಯಾರಿಯಲ್ಲಿರುತ್ತದೆ.
3. ಈ ಅವಧಿಯಲ್ಲಿ ಎಲ್ಲಾ ಕಛೇರಿಗಳು ಸೋಮವಾರದಿಂದ ಶುಕ್ರವಾರದವರೆಗೆ ವಾರದಲ್ಲಿ 5 ದಿನಗಳು ಮಾತ್ರ ಕಾರ್ಯನಿರ್ವಹಿಸುವುದು.
4. ವಾರಾಂತ್ಯದ ಕರ್ಫ್ಯೂ ಸಮಯದಲ್ಲಿ ತುರ್ತು ಉದ್ದೇಶಗಳಿಗಾಗಿ ಜನರ ಅಗತ್ಯತೆಗನುಗುಣವಾಗಿ ಸಾರ್ವಜನಿಕರಿಗೆ ಕಾರ್ಯನಿರ್ವಹಿಸಲು ಸಾರ್ವಜನಿಕ ಸಾರಿಗೆ ಸಂಸ್ಥೆಯ ಮುಖ್ಯಸ್ಥರು ಕ್ರಮಕೈಗೊಳ್ಳುವುದು.
5. ಕೋವಿಡ್ ಸಮುಚಿತ ವರ್ತನೆಗಳನ್ನು ಕಡ್ಡಾಯವಾಗಿ ಪಾಲಿಸಿಕೊಂಡು ಮತ್ತು ಸಂಪೂರ್ಣವಾಗಿ ಲಸಿಕೆ ಪಡೆದ ವ್ಯಕ್ತಿಗಳಿಗೆ ಮಾತ್ರ ಆಸನ ಸಾಮರ್ಥ್ಯವನ್ನು 50% ಕ್ಕೆ ಮಿತಿಗೊಳಿಸಿ ಪಬ್‌ಗಳು / ಕ್ಲಬ್‌ಗಳು / ರೆಸ್ಟೋರೆಂಟ್‌ಗಳು / ಬಾರ್‌ಗಳು / ಹೋಟೆಲ್ ಗಳು / ಹೋಟೆಲ್‌ಗಳಲ್ಲಿ ತಿನ್ನುವ ಸ್ಥಳಗಳು ಇತ್ಯಾದಿ ಗೆ ಅನುಮತಿಸಿದೆ.
6. ಕೋವಿಡ್ ಸಮುಚಿತ ವರ್ತನೆಗಳನ್ನು ಕಡ್ಡಾಯವಾಗಿ ಪಾಲಿಸಿಕೊಂಡು ಮತ್ತು ಸಂಪೂರ್ಣವಾಗಿ ಲಸಿಕೆ ಪಡೆದ ವ್ಯಕ್ತಿಗಳಿಗೆ ಮಾತ್ರ ಆಸನ ಸಾಮರ್ಥ್ಯವನ್ನು 50% ಕ್ಕೆ ಮಿತಿಗೊಳಿಸಿ ಎಲ್ಲಾ ಸಿನೆಮಾ ಹಾಲ್‌ಗಳು, ಮಲ್ಟಿಪ್ಲೆಕ್ಸ್ ಗಳು, ಚಿತ್ರಮಂದಿರಗಳು, ರಂಗಮಂದಿರಗಳು, ಆಡಿಟೋರಿಯಮ್ ಗಳು ಮತ್ತು ಇತರ ಸಭಾಂಗಣಗಳು ಕಾರ್ಯಾಚರಿಸುವುದು.
7. ರಾಜ್ಯ ಸರಕಾರದ ಚಾಲ್ತಿಯಲ್ಲಿರುವ ಮಾರ್ಗಸೂಚಿಯಂತೆ ಕೋವಿಡ್ ಸಮುಚಿತ ವರ್ತನೆಗಳನ್ನು ಕಡ್ಡಾಯವಾಗಿ ಪಾಲಿಸಿಕೊಂಡು ಹೊರಾಂಗಣ ಪ್ರದೇಶಗಳಲ್ಲಿ 200 ಜನರು ಮತ್ತು ಒಳಾಂಗಣ ಪ್ರದೇಶಗಳಲ್ಲಿ ಮದುವೆಯನ್ನು ನಡೆಸಲು ಅನುಮತಿಸಿದೆ.
8. ಧಾರ್ಮಿಕ ಸ್ಥಳಗಳಲ್ಲಿ ದರ್ಶನಕ್ಕೆ ಮಾತ್ರ ತೆರೆಯಲು ಅನುಮತಿಸಿದೆ. ಯಾವುದೇ ಸೇವೆ ಇತ್ಯಾದಿಗಳನ್ನು ಅನುಮತಿಸಲಾಗುವುದಿಲ್ಲ, ನಿಗದಿಪಡಿಸಲಾದ ಸಮಯದಲ್ಲಿ ಸಂಪೂರ್ಣವಾಗಿ ಲಸಿಕೆಯನ್ನು ಪಡೆದ 50 ಜನರಿಗೆ ಮಾತ್ರ ಅನುಮತಿಸಿದೆ.

ವಾರದ 5 ದಿನಗಳಲ್ಲಿ ಎಂದಿನಂತೆ ಮಾಲ್‌ಗಳು, ಶಾಪಿಂಗ್ ಕಾಂಪ್ಲೆಕ್ಸ್‌ಗಳು, ಎಲ್ಲಾ ಪ್ರತ್ಯೇಕವಾಗಿರುವ ಅಂಗಡಿಗಳು ಮತ್ತು ಸಂಸ್ಥೆಗಳು ಸೂಕ್ತ ಕೋವಿಡ್ ಸಮುಚಿತ ವರ್ತನೆಗಳನ್ನು ಪಾಳಿಸುವ ಷರತ್ತಿಗೊಳಪಟ್ಟು ಕಾರ್ಯನಿರ್ವಹಸಲು ಅನುಮತಿಸಿದೆ.

DISTRICT MAGISTRATE D.K.
GOVT. OF KARNATAKA

Website: www.dk.nic.in Phone: 0824-2220588 Fax: 0824-2441564 Email:dc.mnglr@gmail.com

10. ಪೂರ್ಣ ಪ್ರಮಾಣದಲ್ಲಿ ಕೋವಿಡ್ ಲಸಿಕೆ ಪಡೆದವರಿಗೆ ಮಾತ್ರ ಈಜು ಕೊಳಗಳಲ್ಲಿ ಮತ್ತು ಜಿಮ್‌ಗಳಲ್ಲಿ 50% ಸಾಮರ್ಥ್ಯ ಹೊಂದಿಕೊಂಡು ಬಳಸಲು ಅನುಮತಿಸಿದೆ.

11. 50% ಸಾಮರ್ಥ್ಯದೊಂದಿಗೆ ಕ್ರೀಡಾ ಸಂಕೀರ್ಣಗಳು ಮತ್ತು ಸ್ಟೇಡಿಯಂಗಳು ಕಾರ್ಯನಿರ್ವಹಿಸಲು ಅನುಮತಿಸಿದೆ.

12. ಎಲ್ಲಾ Rallyಗಳು, ಧರಣಿಗಳು, ಪ್ರತಿಭಟನೆಗಳನ್ನು ನಿಷೇಧಿಸಲಾಗಿದೆ.

13. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಸರ್ಕಾರ ಹೊರಡಿಸಿದ ಚಾಲ್ತಿಯಲ್ಲಿರುವ ಸುತ್ತೋಲೆ/ಮಾರ್ಗಸೂಚಿಗಳನ್ವಯ ಕೇರಳ ರಾಜ್ಯದಿಂದ ದಕ್ಷಿಣ ಕನ್ನಡ ಜಿಲ್ಲೆಗೆ ಪ್ರವೇಶ ಕಲ್ಪಿಸುವ ಗಡಿಭಾಗಗಳಲ್ಲಿ ಈಗಾಗಲೇ ನಿರ್ಮಿಸಲಾಗಿರುವ ಚೆಕ್ ಪೋಸ್ಟ್ ಗಳಲ್ಲಿ ತೀವ್ರ ಕಣ್ಗಾವಲು ಮತ್ತು ತಪಾಸಣೆ ಕಾರ್ಯವನ್ನು ನಡೆಸುವುದು.

## <u>ವಾರಾಂತ್ಯದ ಕರ್ಫ್ಯೂ ಮಾರ್ಗಸೂಚಿಗಳು</u>

ಈ ಕೆಳಗೆ ತಿಳಿಸಲಾದ ಅಗತ್ಯ ಮತ್ತು ತುರ್ತು ಚಟುವಟಿಕೆಗಳನ್ನು ಹೊರತುಪಡಿಸಿ **<u>ಶುಕ್ರವಾರ ರಾತ್ರಿ ಗಂಟೆ 10-00 ರಿಂದ ಸೋಮವಾರ ಬೆಳಿಗ್ಗೆ ಗಂಟೆ 5-00ರ</u>** ನಡುವೆ ವ್ಯಕ್ತಿಗಳ ಸಕಾರಣಗಳಿಲ್ಲದೆ ಚಲನೆಯನ್ನು ಕಟ್ಟುನಿಟ್ಟಾಗಿ ನಿಷೇಧಿಸಲಾಗಿದೆ.

1. ಎಲ್ಲಾ ರಾಜ್ಯ ಮತ್ತು ಕೇಂದ್ರ ಸರ್ಕಾರಿ ಕಚೇರಿಗಳು ಮತ್ತು ಅವುಗಳ ಸ್ವಾಯತ್ತ ಸಂಸ್ಥೆಗಳು, ನಿಗಮಗಳು, ಇತ್ಯಾದಿ, ತುರ್ತು ಪರಿಸ್ಥಿತಿಯಲ್ಲಿ ವ್ಯವಹರಿಸಲು ಅವಕಾಶವಿರುತ್ತದೆ. ಅಗತ್ಯ ಸೇವೆಗಳು ಮತ್ತು ಕೋವಿಡ್-19 ನಿಯಂತ್ರಣ ಮತ್ತು ನಿರ್ವಹಣಾ ಕರ್ತವ್ಯಗಳು ಸಂಪೂರ್ಣವಾಗಿ ಕಾರ್ಯನಿರ್ವಹಿಸುವುದು ಮತ್ತು ಈ ಕುರಿತು ಸಂಬಂಧಿಸಿ ಅಧಿಕಾರಿ / ಸಿಬ್ಬಂದಿಗಳಿಗೆ ಅನಿಯಂತ್ರಿತ ಚಲನೆಗೆ ಅನುಮತಿಸಿದೆ.

2. ಎಲ್ಲಾ ಸಾರ್ವಜನಿಕ ಉದ್ಯಾನವನಗಳನ್ನು ಮುಚ್ಚಲಾಗಿದೆ.

3. ಐಟಿ ಕೈಗಾರಿಕೆಗಳು ಸೇರಿದಂತೆ ಎಲ್ಲಾ ಕೈಗಾರಿಕೆಗಳಿಗೆ ಕರ್ಫ್ಯೂ ನಿರ್ಬಂಧದಿಂದ ವಿನಾಯಿತಿ ನೀಡಿದೆ ಮತ್ತು ಅಂತಹ ಸಂಸ್ಥೆಗಳ ನೌಕರರ ಸಂಚಾರಕ್ಕೆ, ಅವರ ಸಂಬಂಧಪಟ್ಟ ಸಂಸ್ಥೆ / ಕಂಪನಿಯು ನೀಡಿದ ಅಧಿಕೃತ ಗುರುತಿನ ಚೀಟಿ / ಹೊಂದಿಕೊಂಡು ಪ್ರಯಾಣಿಸಲು ಅನುಮತಿಸಲಾಗಿದೆ.

4. ಕನಿಷ್ಠ ಪುರಾವೆಗಳೊಂದಿಗೆ ರೋಗಿಗಳು ಮತ್ತು ಅವರ ಪರಿಚಾರಕರು / ತುರ್ತು ಅಗತ್ಯತೆಯ ಅವಶ್ಯಕತೆವಿರುವ ವ್ಯಕ್ತಿಗಳು, ಲಸಿಕೆಯನ್ನು ತೆಗೆದುಕೊಳ್ಳಲು ಉದ್ದೇಶಿಸಿರುವ ಅರ್ಹ ವ್ಯಕ್ತಿಗಳು ಚಲನೆಗೆ ಅನುಮತಿಸಲಾಗುವುದು.

5. ಆಹಾರ, ದಿನಸಿ, ಹಣ್ಣುಗಳು ಮತ್ತು ತರಕಾರಿಗಳು, ಮಾಂಸ ಮತ್ತು ಮೀನು, ಡೈರಿ ಮತ್ತು ಹಾಲಿನ ಬೂತ್‌ಗಳು ಮತ್ತು ಪ್ರಾಣಿಗಳ ಮೇವುಗಳೊಂದಿಗೆ ವ್ಯವಹರಿಸುವ ಅಂಗಡಿಗಳು ಕಾರ್ಯನಿರ್ವಹಿಸಲು ಅನುಮತಿಸಿದೆ. ಬೀದಿ ಬದಿ ವ್ಯಾಪಾರಿಗಳಿಗೆ ಕೆಲಸ ಮಾಡಲು ಅವಕಾಶ ನೀಡಲಾಗಿದೆ. ಸಾರ್ವಜನಿಕ ವಿತರಣಾ ವ್ಯವಸ್ಥೆಯ ಅಂಗಡಿಗಳು ಕಾರ್ಯನಿರ್ವಹಿಸಲು ಅನುಮತಿಸಲಾಗಿದೆ. ತಮ್ಮ ಮನೆಗಳ ಹೊರಗೆ ವ್ಯಕ್ತಿಗಳ ಚಲನವಲನವನ್ನು ಕಡಿಮೆ ಮಾಡಲು ಎಲ್ಲಾ ವಸ್ತುಗಳ Home Delivery ಗೆ 24x7 ಪ್ರೋತ್ಸಾಹಿಸಲಾಗಿದೆ. ಕಾರ್ಯಾಚರಣೆಗಳು ಕೋವಿಡ್-19 ನಿರ್ವಹಣೆಗಾಗಿ ರಾಷ್ಟ್ರೀಯ ನಿರ್ದೇಶನಗಳಿಗೆ ಬದ್ಧವಾಗಿರಬೇಕು.

6. ರೆಸ್ಟೋರೆಂಟ್ ಮತ್ತು ತಿನಿಸುಗಳನ್ನು ತೆಗೆದುಕೊಂಡು ಹೋಗಲು ಮತ್ತು ಮನೆಗೆ ತಲುಪಿಸಲು ಮಾತ್ರ ಅನುಮತಿಸಲಾಗಿದೆ.

ಬಸ್ಸು, ರೈಲು ಮತ್ತು ವಿಮಾನ ಪ್ರಯಾಣಕ್ಕೆ ಅನುಮತಿಸಿದೆ. ವಿಮಾನ, ರೈಲು ಮತ್ತು ರಸ್ತೆ ಮೂಲಕ ಪ್ರಯಾಣಿಕರ ಸಂಚಾರಕ್ಕೆ ಅನುಕೂಲವಾಗಲು ವಿಮಾನ ನಿಲ್ದಾಣಗಳಿಗೆ, ಬಸ್ ಟರ್ಮಿನಲ್ / ಬಸ್ ನಿಲ್ದಾಣಗಳು ಮತ್ತು ರೈಲ್ವೆ ನಿಲ್ದಾಣಗಳಿಗೆ ಹೋಗಿ

ಬರುವುದಕ್ಕೆ ಸಾರ್ವಜನಿಕ ಸಾರಿಗೆ ವಾಹನಗಳು, ಖಾಸಗಿ ವಾಹನಗಳು ಮತ್ತು ಟ್ಯಾಕ್ಸಿಗಳ ಸಂಚಾರಕ್ಕೆ ಅನುಮತಿ ನೀಡಲಾಗಿದೆ. ಅಧಿಕೃತ ಪ್ರಯಾಣ ದಾಖಲೆ ಅಥವಾ ಟಿಕೆಟ್ ಅನ್ನು ಪ್ರದರ್ಶಿಸಿದ ನಂತರವೇ ಮತ್ತು ಕೋವಿಡ್ ಸಮುಚಿತ ವರ್ತನೆಗಳನ್ನು ಪಾಲಿಸಿದ್ದಲ್ಲಿ ಮಾತ್ರ ಅಂತಹ ಸಂಚಾರಕ್ಕೆ ಅನುಮತಿ ನೀಡಲಾಗುವುದು.

8. 8. ಕೋವಿಡ್ 19 ಸೂಕ್ತವಾದ ನಡವಳಿಕೆ ಮತ್ತು ರಾಜ್ಯ ಸರ್ಕಾರವು ಹೊರಡಿಸಿದ ಚಾಲ್ತಿಯಲ್ಲಿರುವ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲಿಸುವ ಮೂಲಕ ತೆರೆದ ಸ್ಥಳಗಳಲ್ಲಿ 200 ಕ್ಕಿಂತ ಹೆಚ್ಚು ಜನರು ಮೀರದಂತೆ ಮತ್ತು ಮುಚ್ಚಿದ ಸ್ಥಳಗಳಲ್ಲಿ 100ಕ್ಕಿಂತ ಜನರು ಮೀರದಂತೆ ವಿವಾಹ ಕಾರ್ಯಗಳನ್ನು ನಡೆಸಲು ಅನುಮತಿಸಲಾಗಿದೆ.

ಈ ಆದೇಶವನ್ನು ಉಲ್ಲಂಘಿಸಿದಲ್ಲಿ ಅಂತಹವರ ವಿರುದ್ಧ ವಿಪತ್ತು ನಿರ್ವಹಣಾ ಕಾಯ್ದೆ 2005 ರ ಕಲಂ 51 ರಿಂದ 60 ರನ್ವಯ, ಐಪಿಸಿ ಕಲಂ 188 ರಂತೆ ಮತ್ತು ಕರ್ನಾಟಕ ಸಾಂಕ್ರಾಮಿಕ ರೋಗಗಳ ಅಧಿನಿಯಮ 2020 ರ ಕಲಂ 4, 5 ಮತ್ತು 10 ರಂತೆ ಕ್ರಮ ಜರಗಿಸಲಾಗುವುದು.

ಈ ಆದೇಶವನ್ನು ದಿನಾಂಕ: 05-01-2022 ರಂದು ನನ್ನ ಸ್ವಹಸ್ತಾಕ್ಷರ ಮತ್ತು ಮುದ್ರೆಯೊಂದಿಗೆ ಹೊರಡಿಸಲಾಗಿದೆ.

DISTRICT MAGISTRATE, D. K. GOVT. OF KARNATAKA

05/01/2022

ಡಾ|| ರಾಜೇಂದ್ರ ಕೆ.ವಿ., ಭಾ.ಆ.ಸೇ.,
ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ,
ಹಾಗೂ ಅಧ್ಯಕ್ಷರು,
ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ,
ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.

ರಿಗೆ,

1. ಪೊಲೀಸ್ ಆಯುಕ್ತರು, ಮಂಗಳೂರು ನಗರ.
2. ಮುಖ್ಯ ಕಾರ್ಯನಿರ್ವಹಣಾಧಿಕಾರಿ, ದಕ್ಷಿಣ ಕನ್ನಡ ಜಿಲ್ಲಾ ಪಂಚಾಯತ್, ಮಂಗಳೂರು.
3. ಪೊಲೀಸ್ ಅಧೀಕ್ಷಕರು, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.
4. ಆಯುಕ್ತರು, ಮಹಾನಗರ ಪಾಲಿಕೆ, ಮಂಗಳೂರು.
5. ಯೋಜನಾ ನಿರ್ದೇಶಕರು, ಜಿಲ್ಲಾ ನಗರಾಭಿವೃದ್ಧಿ ಕೋಶ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.
6. ಸಹಾಯಕ ಆಯುಕ್ತರು, ಮಂಗಳೂರು / ಪುತ್ತೂರು ಉಪವಿಭಾಗ.
7. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.
8. ಜಿಲ್ಲಾ ಶಸ್ತ್ರ ಚಿಕಿತ್ಸಕರು ಮತ್ತು ಅಧೀಕ್ಷಕರು, ವೆನ್ ಲಾಕ್ ಜಿಲ್ಲಾ ಆಸ್ಪತ್ರೆ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.
9. ಜಿಲ್ಲೆಯ ಎಲ್ಲಾ ತಹಶೀಲ್ದಾರರುಗಳಿಗೆ.
10. ಜಿಲ್ಲೆಯ ಎಲ್ಲಾ ತಾಲೂಕು ಆರೋಗ್ಯಾಧಿಕಾರಿಗಳಿಗೆ.
11. ಎಲ್ಲಾ ಜಿಲ್ಲಾ ಮಟ್ಟದ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳಿಗೆ.
12. ಹಿರಿಯ ಸಹಾಯಕ ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು - ಇವರು ಜಿಲ್ಲೆಯ ಎಲ್ಲಾ ಪ್ರಮುಖ ಸುದ್ದಿ ಮಾಧ್ಯಮಗಳಲ್ಲಿ ಪ್ರಚುರ ಪಡಿಸಲು ತಿಳಿಸಿದೆ.